# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**<u>ಪತ್ರಿಕಾ ಪ್ರಕಟಣೆ</u>** **ದಿನಾಂಕ: 20.07.2019**

## ***<u>ಬಿಬಿಎಂಪಿ ವ್ಯಾಪ್ತಿಯಲ್ಲಿ ಪಿಒಪಿ ಗಣೇಶ ಮೂರ್ತಿ ಮಾರಾಟ ಹಾಗೂ ನಿಷೇಧಿತ ಪ್ಲಾಸ್ಟಿಕ್ ಉತ್ಪನ್ನ ಕಂಡುಬಂದಲ್ಲಿ ಸಂಬಂಧಪಟ್ಟ ಆರೋಗ್ಯಾಧಿಕರಿಗಳ ಮೇಲೆ ಶಿಸ್ತು ಕ್ರಮ: ಪೂಜ್ಯ ಮಹಾಪೌರರು ರವರಿಂದ ಸುತ್ತೋಲೆ</u>***

ಬಿಬಿಎಂಪಿ ವ್ಯಾಪ್ತಿಯಲ್ಲಿ ಪಿಒಪಿ ಗಣೇಶ ಮೂರ್ತಿ ಹಾಗೂ ನಿಷೇಧಿತ ಪ್ಲಾಸ್ಟಿಕ್ ಉತ್ಪನ್ನಗಳ ಮಾರಾಟ ಕಂಡುಬಂದಲ್ಲಿ ಸಂಬಂಧಪಟ್ಟ ಆರೋಗ್ಯಾಧಿಕಾರಿಗಳನ್ನೇ ನೇರ ಹೊಣೆಗಾರನ್ನಾಗಿಸಲಾಗುವುದು. ಜೊತೆಗೆ ಅಂತಹವರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಕ್ರಮವಹಿಸಲಾಗುವುದು ಎಂದು ಪೂಜ್ಯ ಮಾಹಾಪೌರರು ಶನಿವಾರ ಸುತ್ತೋಲೆ ಹೊಡಿಸಿದ್ದಾರೆ.

ನಗರದಲ್ಲಿ ಪರಿಸರ ಸಂರಕ್ಷಣೆ ಮಾಡುವ ಹಿತದೃಷ್ಟಿಯಿಂದ ಗಣೇಶ ಚತುರ್ಥಿ ವೇಳೆ ಪ್ಲಾಸ್ಟರ್ ಆಫ್ ಪ್ಯಾರೀಸ್(ಪಿಒಪಿ) ಗಣೇಶ ಮೂರ್ತಿಗಳ ಬದಲು ಮಣ್ಣಿನಲ್ಲಿ ತಯಾರಿಸಿರುವ ಗಣೇಶ ಮೂರ್ತಿಗಳನ್ನು ಉಪಯೋಗಿಸುವಂತೆ ಈಗಾಗಲೇ ಸಾರ್ವಜನಿಕರಲ್ಲಿ ಕೋರಲಾಗಿದೆ. ಈ ಸಂಬಂಧ ನಗರದ ಬಹುತೇಕ ಕಡೆ ಪಿಒಪಿ ಗಣೇಶ ತಯಾರಿಸುವುದು ಕಡಿಮೆ ಆಗಿದೆ. ಆದರೆ ಪಾಲಿಕೆ ಹೊರ ಪ್ರಮದೇಶಗಳಿಂದ ಪಿಒಪಿ ಗಣೇಶ ಮೂರ್ತಿಗಳನ್ನು ನಗರಕ್ಕೆ ತಂದು ಮಾರಾಟ ಮಾಡಲು ಸಿದ್ಧತೆ ನಡೆಸಲಾಗಿದೆ ಎಂಬ ಮಾಹಿತಿ ತಿಳಿದು ಬಂದಿದೆ.

ನಗರದಲ್ಲಿ ಪಿಒಪಿ ಗಣೇಶ ಮೂರ್ತಿ ಬಾರದಿರುವಂತೆ ಎಚ್ಚರವಹಿಸಲು ಪೊಲೀಸ್ ಇಲಾಖೆಗೆ ಪತ್ರ ಬರೆಯಲಾಗಿದೆ. ಜೊತೆಗೆ ಎಲ್ಲಾ ವಲಯಗಳ ಆರೋಗ್ಯಾಧಿಕಾರಿಗಳು ಕೂಡಾ ಈ ಬಗ್ಗೆ ಹೆಚ್ಚು ಗಮನ ಹರಿಸಿ, ಯಾವುದೇ ಕಾರಣಕ್ಕೂ ಪಿಒಪಿ ಗಣೇಶ ಮೂರ್ತಿ ನಗರಕ್ಕೆ ಬರದಂತೆ ನೋಡಿಕೊಳ್ಳಬೇಕು. ಒಂದು ವೇಳೆ ಪಿಒಪಿ ಗಣೇಶ ಮೂರ್ತಿಗಳು ಕಂಡುಬಂದಲ್ಲಿ ಅವನ್ನು ಪಾಲಿಕೆ ವಶಕ್ಕೆ ಪಡೆದು ಬೇರೆ ರಾಜ್ಯಕ್ಕೆ ರವಾನಿಸಲು ಕ್ರಮ ಕೈಗೊಳ್ಳಬೇಕು. ಅಲ್ಲದೆ ಪಿಒಪಿ ಗಣೇಶ ಮಾರಾಟ ಮಾಡುತ್ತಿದ್ದ ವರ್ತಕರಿಗೆ ದಂಡ ವಿಧಿಸಿ ಕ್ರಿಮಿನಲ್ ಮಕೋದ್ದಮೆ ದಾಖಸಲು ಕ್ರಮ ಕೈಗೊಳ್ಳಬೇಕು.

ಇಷ್ಟೆಲ್ಲಾ ಕ್ರಮಗಳನ್ನು ಕೈಗೊಂಡು ಪಾಲಿಕೆ ವ್ಯಾಪ್ತಿಯಲ್ಲಿ ಪಿಒಪಿ ಗಣೇಶ ಮೂರ್ತಿಗಳು ಮಾರಾಟ ಮಾಡುತ್ತಿರುವುದು ಕಂಡುಬಂದಲ್ಲಿ ಸಂಬಂಧಪಟ್ಟ ಆರೋಗ್ಯಾಧಿಕಾರಿಗಳನ್ನೇ ನೇರ ಹೊಣೆಗಾರನ್ನಾಗಿಸಿ ಅವರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಸೂಕ್ತ ಕ್ರಮ ವಹಿಸಲಾಗುವುದು ಎಂದು ಮಹಾಪೌರರು ಸುತ್ತೋಲೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ ನಿಷೇಧಿತ ಪ್ಲಾಸ್ಟಿಕ್ ಉತ್ಪನ್ನಗಳನ್ನು ಬಳಸದಂತೆ ಕಡ್ಡಾಯಗೊಳಿಸಲಾಗಿದೆ. ಈ ಪೈಕಿ ಬಿಬಿಎಂಪಿ ವ್ಯಾಪ್ತಿಯಲ್ಲೂ ಸಂಪೂರ್ಣ ನಿಷೇಧಿಸುವ ನಿಟ್ಟಿನಲ್ಲಿ ಈಗಾಗಲೇ ಪಾಲಿಕೆ ಎಲ್ಲಾ ಆರೋಗ್ಯಾಧಿಕಾರಿಗಳ ಜೊತೆ ಸಭೆ ಕರೆದು ಜುಲೈ 15ರಿಂದ ಬೃಹತ್ ಆಂದೋಲನವನ್ನು ಹಮ್ಮಿಕೊಳ್ಳಲಾಗಿದೆ. ಆದರೂ ಬೀದಿಬದಿ ವ್ಯಾಪಾರಿಗಳು, ಮಾರುಕಟ್ಟೆ, ತಳ್ಳುವ ಗಾಡಿ ವರ್ತಕರು ಹಾಗೂ ಸಗಟು ವ್ಯಾಪಾರ ಮಳಿಗೆಗಳಲ್ಲಿ ಅಡೆತಡೆಯಿಲ್ಲದೆ ನಿಷೇಧಿತ ಪ್ಲಾಸ್ಟಿಕ್ ಉತ್ಪನ್ನಗಳು ಉಪಯೋಗಿಸುತ್ತಿರುವುದು ಕಂಡುಬಂದಿದೆ.

ಪಾಲಿಕೆ ವ್ಯಾಪ್ತಿಯಲ್ಲಿ ಪರಿಸರ ಸ್ನೇಹಿ ವಾತಾವರಣ ನಿರ್ಮಾಣ ಮಾಡುವ ದೃಷ್ಟಿಯಿಂದ ಪಾಲಿಕೆಯ ಎಲ್ಲಾ ಆರೋಗ್ಯಾಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ನಗರದಲ್ಲಿ ಪ್ಲಾಸ್ಟಿಕ್ ಬಳಕೆ ಮಾಡದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಪ್ಲಾಸ್ಟಿಕ್ ಬಳಕೆ ಮಾಡುತ್ತಿದ್ದ ಪಕ್ಷದಲ್ಲಿ ಅದನ್ನು ಪಾಲಿಕೆ ವಶಕ್ಕೆ ಪಡೆದು ದುಪ್ಪಟ್ಟು ದಂಡ ವಿಧಿಸಬೇಕು. ಆಗಲೂ ಎಚ್ಚೆತ್ತುಕೊಳ್ಳದಿದ್ದರೆ ಅಂಗಡಿಗಳ ಪರವಾನಗಿ ರದ್ದುಗೊಳಿಸಿ ಬೀಗ ಮುದ್ರೆ ಹಾಕಬೇಕು. ಒಂದು ವೇಳೆ ಪಾಲಿಕೆ ಆರೋಗ್ಯಾಧಿಕಾರಿಗಳು ಈ ಬಗ್ಗೆ ಹೆಚ್ಚು ಗಮನ ಹರಿಸದಿದ್ದರೆ ಸಂಬಂಧಪಟ್ಟ ಆರೋಗ್ಯಾಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಕ್ರಮ ವಹಿಸಲಾಗುವುದು ಎಂದಿದ್ದಾರೆ.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**